# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಸಕಾಅ/ವಾ.ನಂ.39/ಪಿಆರ್/ 8 /2020-21

ಸಹಾಯಕ ಕಾರ್ಯಪಾಲಕ ಅಭಿಯಂತರರವರ ಕಛೇರಿ
ಪೀಣ್ಯ ಕೈಗಾರಿಕಾ ಪ್ರದೇಶ ಉಪವಿಭಾಗ, ದಾಸರಹಳ್ಳಿ ವಲಯ
ಹೆಚ್.ಎಂ.ಟಿ.ಬಡಾವಣೆ, ನಾಗಸಂದ್ರ ಪೋಸ್ಟ್
ಬೆಂಗಳೂರು, ದಿನಾಂಕ :16/01/21

## ವಾರ್ಡ್ -39ರ ವಾರ್ಡ್ ಸಭೆಯ ನಡವಳಿ

ದಿನಾಂಕ:-16-01-2021 ರಂದು ಪೀಣ್ಯ ಕೈಗಾರಿಕ ಪ್ರದೇಶ ಉಪ ವಿಭಾಗ ವಾರ್ಡ್ ನಂ.39 ರ ವಾರ್ಡ್ ಕಛೇರಿಯಲ್ಲಿ ಶ್ರೀ.ಶಿವಕುಮಾರ್, ವಾರ್ಡ್-39 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿಗಳು.

ಹಾಜರಿದ್ದವರು:

1. ಶ್ರೀ ಹೆಚ್.ಶಿವಕುಮಾರ್, ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು
2. ಶ್ರೀ.ಡಿ.ಎಸ್.ಮಂಜುನಾಥ್, ಸಹಾಯಕ ಅಭಿಯಂತರರು ಮತ್ತು ಕಾರ್ಯದರ್ಶಿ
3. ಶ್ರೀಮತಿ.ಶಿವಮ್ಮ.ಎಸ್, ಸಹ ಕಂದಾಯ ಅಧಿಕಾರಿ, ಪೀಣ್ಯ ಕೈಗಾರಿಕಾ ಪ್ರದೇಶ
4. ಶ್ರೀ ಹೆಚ್.ರಮೇಶ್, ಕಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಸದಸ್ಯರು.
5. ಜನನಿ.ಡಿ.ದೇವರಾಜ್, ಸಹಾಯಕ ಅಭಿಯಂತರರು ವಾರ್ಡ್ ನಂ39
6. ಸಮ್ಮಿಉಲ್ಲಾ,ತೋಟಗಾರಿಕೆ ಇಲಾಖೆ
7. ಶ್ರೀಮತಿ.ಕುಮಾರಿ, ಅನೂಷ್ ಗ್ರೂಪ್

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

- ಹಿಂದಿನ ಸಭೆಯ ನಡವಳಿಗಳು ಓದಿ ರೆಕಾರ್ಡ್ ಮಾಡಲಾಯಿತು ಅದರಂತೆ ಡಿ.ಡಬ್ಲ್ಯೂ.ಸಿ.ಸಿ ಸೆಂಟರ್‌ನಲ್ಲಿ ಶೌಚಾಲಯ ಮತ್ತು ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ ತುರ್ತಾಗಿ ಕ್ರಮವಹಿಸುವಂತೆ ತಿಳಿಸಲಾಯಿತು.
- ಕೋವಿಡ್ 2019 ರ ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ಮುಂಜಾಗ್ರತ ಕ್ರಮಗಳ ಬಗ್ಗೆ ವಾರ್ಡಿನ ಹಿ.ಆ.ನಿ ರಾದ ಶ್ರೀ.ಜಗದೀಶ್ ರವರು ವ್ಯಾಕ್ಸಿನ್ ಕಾರ್ಯಕ್ರಮದಲ್ಲಿ ಭಾಗವಹಿಸಿದರಿಂದ ಸಭೆಗೆ ಬಂದಿರಲಿಲ್ಲ ಅದರಂತೆ ಕೋವಿಡ್ ನಿಯಂತ್ರಣಕ್ಕೆ ಭಾರತ ಸರ್ಕಾರ ವ್ಯಯಾಕ್ಸಿನ್ ಬಳಕೆ ಮಾಡುತ್ತಿದ್ದು, ಅದರಂತೆ ದಿನಾಂಕ:-16-11-2021 ರಂದು 10.30 ಕ್ಕೆ ಭಾರತ ಸರ್ಕಾರದ ಮಾರ್ಗಸೂಚಿಯಂತೆ ಪ್ರಾರಂಭಿಸಲಾಗಿದೆ. Front Line Worker ಗೆ ಉಚಿತವಾಗಿ ವ್ಯಾಕ್ಸಿನೇಶನ್ ಮಾಡಲಾಗುವದು ಹಾಗೂ ಎಂದಿನಂತೆ ಮಾಸ್ಕ್ ಮತ್ತು ಸಾಮಾಜಿಕ ಅಂತರ ಕಡ್ಡಾಯ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಗೆ ಮಾಹಿತಿ ನೀಡಿದರು.
- ಘನತ್ಯಾಜ್ಯ ನಿರ್ವಹಣೆ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ ವಾರ್ಡಿನಲ್ಲಿ ಪ್ರತ್ಯೇಕವಾಗಿ ಹಸಿ ಕಸ ಮತ್ತು ಒಣಕಸ ವಿಂಗಡಿಸಿ ಪಡೆಯಲಾಗುತ್ತಿದೆ ಹಾಗೂ ಆಟೋಗಳಿಗೆ ಜಿ.ಪಿ.ಎಸ್ ಮ್ಯಾಪಿಂಗ್ ಅಳವಡಿಸಲಾಗಿದ್ದು ಹಾಗೂ ಆಟೋಗಳು ಮ್ಯಾಪಿಂಗ್ ಸಹ ಮಾಡಲಾಗಿರುತ್ತದೆ ಆದುದರಿಂದ ಯಾವುದೇ ಇಲ್ಲದಂತೆ ಘನತ್ಯಾಜ್ಯ ವಿಲೇವಾರಿ ನಡೆಯುತ್ತಿದೆ. ಒಣ ಕಸ ಸಂಗ್ರಹಕ್ಕೆ 4 ಆಟೋಗಳನ್ನು ನಿಯೋಜಿಸಿದ್ದು ವಾರದಲ್ಲಿ ಪ್ರತಿ ಮನೆಯಿಂದ 2 ಬಾರಿ ಪಡೆಯಲಾಗುತ್ತಿದೆ ಯಾವುದೇ ದೂರಿಗೆ ಅವಾದ ನೀಡದಂತೆ ಒಂದು ವೇಳೆ ದೂರು ಬಂದರೆ ತಕ್ಷಣ ಸ್ಪಂದಿಸಿ ಘನತ್ಯಾಜ್ಯ ವಿಲೇವಾರಿ ಮಾಡಲಾಗುತ್ತಿದೆ ಎಂಧು ಸಭೆಗೆ ಮಾಹಿತಿ ನೀಡಿದಿರು.
- ವಾರ್ಡಿನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ ಸಭೆಗೆ ವರ್ಡಿನ ಸಹಾಯಕ ಅಭಿಯಂತರರು ಮಾತನಾಡುತ್ತಾ ಗುಂಡಿ ಮುಚ್ಚುವ ಕಾರ್ಯಕ್ರಮ ಮುಗಿದಿರುತ್ತದೆ. ಡಿ ಎಕ್ಸ್ ಮ್ಯಾಕ್ಸ್ ಹತ್ತಿರ ನಾಗಸಂದ್ರ ಹತ್ತಿರ ಕಲ್‌ವರ್ಟ್ ಕೆಲಸ ಪ್ರಗತಿಯಲ್ಲಿರುತ್ತದೆ
- ಬೀದಿ ದೀಪಗಳ ನಿರ್ವಹಣೆ ಬಗ್ಗೆ ಯಾವುದೇ ದೂರು ಬಂದಿರುವುದಿಲ್ಲ ಎಂದು ಹಾಜರಿದ್ದ ವಿದ್ಯುತ್ ಸಹಾಯಕರು ಸಭೆಗೆ ತಿಳಿಸಿದರು.

ಮು.ತಿ.ನೋ

- ಉದ್ಯಾನವಗಳ ನಿರ್ವಹಣೆ ಬಗ್ಗೆ ಸಭೆಯಲ್ಲಿ ಮಾತನಾಡುತ್ತಾ ಉದ್ಯಾನವನಗಳಲ್ಲಿ ಹಸಿರು ಎಲೆ ಬಿಳುತ್ತಿದ್ದು ಬೆಂಕಿ ಹಾಕದಂತೆ ಗೊಬ್ಬರ ತಯಾರಿಸುವಂತೆ ಹಾಗೂ ಬೆಂಕಿ ಬಿದ್ದರೆ ತಕ್ಷಣ ಹಾರಿಸುವಂತೆ ಹಾಗೂ ಘನತ್ಯಾಜ್ಯ ವಿಲೇವಾರಿ ಆಟೋಗಳಿಗೆ ತುಂಬಿಸುವಂತೆ ಸಭೆಯಲ್ಲಿ ನೋಡಲ್ ಅಧಿಕಾರಿಗಳು ತಿಳಿಸಿದರು

ಅಂತಿಮವಾಗಿ ನೋಡಲ್ ಅಧಿಕಾರಿಗಳು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡ ಎಲ್ಲಾ ಇಲಾಖೆಗಳ ಸಮನ್ವತೆಯಿಂದ ಕೆಲಸ ನಿರ್ವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 39 ಚೊಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ವಾರ್ಡ್ ಸಮಿತಿ ಅಧ್ಯಕ್ಷರ
ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ
ವಾರ್ಡ್ ನಂ. 39 ಚೊಕ್ಕಸಂದ್ರ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧಿಕಾರಿಗಳ ಮಾಹಿತಿಗಾಗಿ

1. ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
2. ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3. ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
4. ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
5. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪೀ.ಕೈ.ಪ್ರ)ರವರ ಮಾಹಿತಿಗಾಗಿ ಕಳುಹಿಸಿದೆ
6. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನತ್ಯಾಜ್ಯ) ರವರ ಮಾಹಿತಿಗಾಗಿ ಕಳುಹಿಸಿದೆ
7. ಸಹಾಯಕ ಕಾರ್ಯಪಾಲಕ ಅಭಿಯಂತರರು (ಋಘಅ) ರವರ ಮಾಹಿತಿಗಾಗಿ ಕಳುಹಿಸಿದೆ
8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿಘಾಋಋ)ರವರ ಮಾಹಿತಿಗಾಗಿ ಕಳುಹಿಸಿದೆ
9. ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ರವರ ಮಾಹಿತಿಗಾಗಿ ಕಳುಹಿಸಿದೆ
10. ಸಹಾಯಕ ಕಾರ್ಯಪಾಲಕ ಅಭಿಯಂತರರು (ಯೋಜನೆ) ರವರ ಮಾಹಿತಿಗಾಗಿ ಕಳುಹಿಸಿದೆ
11. ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಎನ್–5 ಪೀಣ್ಯ ರವರ ಮಾಹಿತಿಗಾಗಿ ಕಳುಹಿಸಿದೆ